ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು - 1**

ಸಂಖ್ಯೆ: ಯೋ8/ಶೌ.ಕು.ನೀರು ನೈ ನಿರ್ವಹಣೆ-01/2019-20 ದಿನಾಂಕ: 30ನೇ ಮೇ 2019

: ಸುತ್ತೋಲೆ :

ವಿಷಯ: ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ-2019 ನ್ನು ಪರಿಣಾಮಕಾರಿಯಾಗಿ ಆಚರಿಸಿ ಅನುಷ್ಠಾನಗೊಳಿಸಲು ಶಾಲೆಗಳಲ್ಲಿ ಮಕ್ಕಳಿಗೆ ಕುಡಿಯುವ ನೀರು, ಶೌಚಾಲಯ ನಿರ್ವಹಣೆ ಮತ್ತು ನೈರ್ಮಲೀಕರಣವನ್ನು ಒದಗಿಸುವ ಬಗ್ಗೆ

ಉಲ್ಲೇಖ:- ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು ಇವರ ಪತ್ರ ಸಂಖ್ಯೆ: ಡಿಡಿ/ಸಿ.ಹೆಚ್/01/2019-20 ದಿನಾಂಕ: 18/05/2019

---*****---

ವಿಷಯದ್ವಯ, ಅತಿಸಾರ ಭೇದಿಯ ತೀವ್ರತರ ನಿಯಂತ್ರಣ ಪಾಕ್ಷಿಕ-2019 ನ್ನು ಪರಿಣಾಮಕಾರಿಯಾಗಿ ಆಚರಿಸಿ ಅನುಷ್ಠಾನಗೊಳಿಸಲು ಉಲ್ಲೇಖಿತ ಪತ್ರದಲ್ಲಿ ನಿರ್ದೇಷನವಿದೆ. ಈ ಹಿನ್ನೆಲೆಯಲ್ಲಿ ದಿನಾಂಕ: 06/06/2019 ರಿಂದ 17-06-2019 ರವರೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಮಾರ್ಗಸೂಚಿಗಳಂತೆ ಆಚರಿಸಬೇಕಾಗುತ್ತದೆ. ಅತಿಸಾರ ಭೇದಿಯಿಂದ ಉಂಟಾಗುವ ಮಕ್ಕಳ ಮರಣ ಪ್ರಮಣಾವನ್ನು ಶೂನ್ಯಗೊಳಿಸುವುದೇ ಕಾರ್ಯಕ್ರಮದ ಧ್ಯೇಯವಾಗಿದೆ. ಈ ಹಿನ್ನೆಲೆಯಲ್ಲಿ ಮಕ್ಕಳಲ್ಲಿ ಶುಚಿತ್ವದ ಬಗ್ಗೆ ಅರಿವನ್ನು ಮೂಡಿಸುವುದು ಬಹಳ ಮುಖ್ಯ, ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಕ್ಕಳಿಗೆ ಶುದ್ಧ ಕುಡಿಯುವ ನೀರು, ಶೌಚಾಲಯ ನಿರ್ವಹಣೆ ಮತ್ತು ಮಕ್ಕಳ ವೈಯಕ್ತಿಕ ನೈರ್ಮಲ್ಯ ಹಾಗೂ ಶುಚಿತ್ವದ ಕಡೆಗೆ ಹೆಚ್ಚಿನ ಗಮನ ನೀಡುವ ಮೂಲಕ ಮಕ್ಕಳಲ್ಲಿ ಶುಚಿತ್ವದ ಬಗ್ಗೆ ಅರಿವನ್ನು ಮೂಡಿಸುವ ಕಾರ್ಯವನ್ನು ಇಲಾಖೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕಾರ್ಯವನ್ನು ನಿರ್ವಹಿಸಬೇಕಾಗಿದೆ. ಈಗಾಗಲೇ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಕುಡಿಯುವ ನೀರು ಮತ್ತು ಶೌಚಾಲಯಗಳ ವಾರ್ಷಿಕ ನಿರ್ವಹಣೆಗಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಮತ್ತು ಪ್ರಸಕ್ತ ಸಾಲಿಸಲ್ಲಿಯೂ ಅನುದಾನವನ್ನು ಬಿಡುಗಡೆ ಮಾಡಲಾಗುತ್ತದೆ.

ಶಿಕ್ಷಣ ಇಲಾಖೆಯ ವತಿಯಿಂದ ಹಾಗೂ ನರೇಗಾ ಯೋಜನೆಯಡಿಯಲ್ಲಿ ಈಗಾಗಲೇ 2000 ಶಾಲೆಗಳಲ್ಲಿ ಹೆಣ್ಣುಮಕ್ಕಳಿಗೆ ಹಾಗೂ ಗಂಡು ಮಕ್ಕಳಿಗೆ ಪ್ರತ್ಯೇಕವಾಗಿ ಶೌಚಾಲಯವನ್ನು ನಿರ್ಮಾಣ ಮಾಡಲಾಗಿರುತ್ತದೆ. ಉಳಿದ ಶಾಲೆಗಳಿಗೂ ಸಹಾ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶೌಚಾಲಯಗಳನ್ನು ನಿರ್ಮಿಸಲು ಅನುದಾನ ಒದಗಿಸಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಭಾಗವಹಿಸಿ ಮಕ್ಕಳಿಗೆ ವೈಯಕ್ತಿಕ ಶುಚಿತ್ವ ಇತ್ಯಾದಿಗಳ ಬಗ್ಗೆ ಶಾಲೆಗಳಲ್ಲಿ ಮಾಹಿತಿಯನ್ನು ನೀಡಲು ಶಾಲಾ ಶಿಕ್ಷಕರುಗಳಿಗೆ ಸೂಕ್ತ ಮಾರ್ಗದರ್ಶನವನ್ನು ನೀಡತಕ್ಕದ್ದು. ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳ ಉಪನಿರ್ದೇಶಕರು(ಅಭಿವೃದ್ಧಿ) ಇವರುಗಳು ತಮ್ಮ ಜಿಲ್ಲೆಯ ಎಲ್ಲಾ ಶಾಲೆಗಳಿಗೂ ಶುಚಿತ್ವದ ಕುರಿತಾಗಿ ಅಗತ್ಯ ಸೂಚನೆ ಮತ್ತು ಮಾರ್ಗದರ್ಶನವನ್ನು ನೀಡಿ ಈ ಕೆಳಕಂಡ ಅಂಶಗಳನ್ನು ಶಾಲೆಗಳಲ್ಲಿ ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಹಂತದಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಹಾಗೂ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ನಡೆಯುವ ಸಮನ್ವಯ ಸಮಿತಿ ಸಭೆಯಲ್ಲಿ ಪಾಲ್ಗೊಳ್ಳಲು ತಿಳಿಸಿದೆ.

**ಸೂಚನೆಗಳು:**

1. ಶಾಲೆಗಳಿಗೆ ಬಿಡುಗಡೆಯಾದ ಅನುದಾನ ಯಾವ ಉದ್ದೇಶಕ್ಕಾಗಿ ಬಿಡುಗಡೆಯಾಗಿದೆಯೋ ಅದೇ ಉದ್ದೇಶಕ್ಕಾಗಿ ಮಾತ್ರ ಬಳಕೆ ಮಾಡಿಕೊಳ್ಳತಕ್ಕದ್ದು. ಶೌಚಾಲಯಗಳಿಗೆ ನೀರಿನ ವ್ಯವಸ್ಥೆ, ಫೆನಾಯಿಲ್, ಡೆಟಾಲ್ ಸೋಪ್ ಮತ್ತು ಕರವಸ್ತ್ರಗಳನ್ನು ಕಡ್ಡಾಯವಾಗಿ ಒದಗಿಸತಕ್ಕದ್ದು.
2. ಶಾಲೆಗಳಲ್ಲಿ ಹೆಣ್ಣುಮಕ್ಕಳ ಶೌಚಾಲಯದ ನೈರ್ಮಲ್ಯದ ಕಡೆಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುವುದು. ಶಾಲೆಗಳಲ್ಲಿ ಹದಿಹರೆಯದ ಹೆಣ್ಣುಮಕ್ಕಳ ವಯಕ್ತಿಯ ನೈರ್ಮಲ್ಯದ ಹಾಗೂ ಶೌಚಾಲಯ ಸ್ವಚ್ಚತೆಯ ಕಡೆ ಗಮನ ಹರಿಸಲು ಆಯಾ ಶಾಲೆಯ ಮಹಿಳಾ ಶಿಕ್ಷಕಿಯರಿಗೆ ಜವಾಬ್ದಾರಿಯನ್ನು ನಿರ್ವಹಿಸಲು ಸೂಚಿಸುವುದು.
3. ಆಯಾ ಶಾಲಾ ವ್ಯಾಪ್ತಿಯ ಸಿ.ಆರ್.ಪಿ/ಬಿ.ಆರ್.ಪಿ/ಇ.ಸಿ.ಇ ಗಳು ಕಾಲಕಾಲಕ್ಕೆ ಶಾಲೆಗಳಿಗೆ ಭೇಟಿ ನೀಡಿ ಮೇಲೆ ವಿವರಿಸಲಾದ ಅಂಶಗಳನ್ನು ಶಾಲಾ ಮುಖ್ಯ ಶಿಕ್ಷಕರು ಪಾಲಿಸಿರುವ ಬಗ್ಗೆ ಮತ್ತು ಮಕ್ಕಳಲ್ಲಿ ವೈಯಕ್ತಿಕ ಸ್ವಚ್ಚತೆಯ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಅಗತ್ಯವಾಗಿ ಪರಿಶೀಲಿಸಿ ಪ್ರತಿ ವಾರ ಆಯಾ ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ವರದಿ ಸಲ್ಲಿಸಲು ತಿಳಿಸಿದೆ.

ಇದೇ ರೀತಿ ಡಯಟ್ ಉಪನ್ಯಾಸಕರುಗಳು ಶಾಲೆಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಇಲಾಖಾ ಸೂಚನೆಗಳನ್ನು ಕಟ್ಟು ನಿಟ್ಟಾಗಿ ಪಾಲಿಸಿರುವ ಬಗ್ಗೆ ಹಾಗೂ ಭೌತಿಕವಾಗಿ ವೀಕ್ಷಿಸಿ ಸ್ವಚ್ಚತೆಯ ಕಡೆ ಗಮನಹರಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.

4. ಆಯಾ ಶಾಲೆಯ ಶೌಚಾಲಯ ನಿರ್ವಹಣೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಯಲ್ಲಿ ಹಾಗೂ ಶೌಚಾಲಯದ ಸ್ವಚ್ಚತೆ–ಶುಚಿತ್ವವನ್ನು ಕಾಪಾಡುವುದು ಆಯಾ ಶಾಲಾ ಮುಖ್ಯ ಶಿಕ್ಷಕರ ಹೊಣೆಗಾರಿಕೆಯಾಗಿರುತ್ತದೆ.
5. ಉಪನಿರ್ದೇಶಕರು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಪ್ರತಿ 15 ದಿನಗಳಿಗೊಮ್ಮೆ ಈ ಬಗ್ಗೆ ತಾಲ್ಲೂಕು ಮತ್ತು ಜಿಲ್ಲಾ ಹಂತದಲ್ಲಿ ಸಭೆ ನಡೆಸಿ ಯಾವುದೇ ಮಕ್ಕಳು ಶೌಚಾಲಯ ಹಾಗೂ ಕುಡಿಯುವ ನೀರು ಸೌಲಭ್ಯದಿಂದ ವಂಚಿತರಾಗದಂತೆ ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು.
6. ಇದು ಪಾಕ್ಷಿಕ ಕಾರ್ಯಕ್ರಮ ಮಾತ್ರವಾಗಿರದೇ ವರ್ಷದ ಎಲ್ಲಾ ದಿನಗಳಲ್ಲೂ ಸಹ ಕಡ್ಡಾಯವಾಗಿ ಮಕ್ಕಳಲ್ಲಿ ಶುಚಿತ್ವದ ಬಗ್ಗೆ ಅರಿವನ್ನು ಮೂಡಿಸುವ ಯೋಜನೆಯಾಗಿರಬೇಕು.

ಮೇಲೆ ವಿವರಿಸಿರುವ ಎಲ್ಲಾ ಸೂಚನೆಗಳನ್ನು ತಪ್ಪದೆ ಪಾಲಿಸುವಂತೆ ಉಪನಿರ್ದೇಶಕರು(ಆಡಳಿತ) ಇವರು ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಸೂಕ್ತ ಸುತ್ತೋಲೆಯನ್ನು ಹೊರಡಿಸಿ ಎಎಸ್.ಡಿ.ಎಂ.ಸಿ ಯವರ ಸಹಬಾಗಿತ್ವದೊಡನೆ ಕಾರ್ಯಕ್ರಮವನ್ನು ಅನುಷ್ಟಾನಗೊಳಿಸಲು ಮುಖ್ಯ ಶಿಕ್ಷಕರಿಗೆ ಮಾರ್ಗದರ್ಶನ ನೀಡುವುದು. ಇಲಾಖೆಯ ಮಾರ್ಗಸೂಚಿಯನ್ನು ಉಲ್ಲಂಘಿಸುವ ಹಾಗೂ ಶಾಲೆಯಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಯ ಬಗ್ಗೆ ಹಾಗೂ ಸ್ವಚ್ಚತೆಯ ಬಗ್ಗೆ ಗಮನಹರಿಸದೇ ಉದಾಸೀನತೆ ತೋರುವ ಮುಖ್ಯೋಪಾಧ್ಯಾಯರ ವಿರುದ್ದ ನಿಯಮಾನುಸಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ತಿಳಿಸಿದೆ.

(ಎಸ್. ಜಯಕುಮಾರ್)
ನಿರ್ದೇಶಕರು. ಪ್ರಾಥಮಿಕ ಶಿಕ್ಷಣ

ಇವರಿಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಉಪನಿರ್ದೇಷಕರು(ಅಭಿವೃದ್ಧಿ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಇವರುಗಳಿಗೆ ಮಾಹಿತಿಗಾಗಿ
3. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ (ಪ್ರತಿಯನ್ನು ಉಪನಿರ್ದೇಶಕರ ಮೂಲಕ )

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, [ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ] 6ನೇ ಮಹಡಿ,
2. ಬಹುಮಹಡಿಗಳ ಕಟ್ಟಡ, ಡಾ॥ ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು 560 001.
3. ರಾಜ್ಯದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
4. ಅಪರ ಆಯುಕ್ತರು, ಕಲಬುರ್ಗಿ ಮತ್ತು ಬೆಳಗಾವಿ ಆಯುಕ್ತಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಅಗತ್ಯ ಮಾಹಿತಿ ಹಾಗೂ ಕ್ರಮಕ್ಕಾಗಿ.
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆನಂದರಾವ್ ವೃತ್ತ, ಬೆಂಗಳೂರು–560009
6. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಹೊಸಕೆರೆ ಹಳ್ಳಿ, ಬೆಂಗಳೂರು.
9. ಕಛೇರಿ ಪ್ರತಿ.